ಬಾಗೇಪಲ್ಲಿ ಕ್ಷೇತ್ರವನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಿಸುವ ಬಗ್ಗೆ

1205 (1471) ಶ್ರೀ ಸಂಪಂಗಿ.ಎನ್ (ಬಾಗೇಪಲ್ಲಿ) : ಮಾನ್ಯ ಕಂದಾಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ) ಬಾಗೇಪಲ್ಲಿ ವಿಧಾನಸಭಾ ಕ್ಷೇತ್ರದಲ್ಲಿ ಶೇ. 100ರಷ್ಟು ಕೃಷಿ ಬೆಳೆಗಳು ಹಾಳಾಗಿದ್ದು ಬರಗಾಲದ ಪರಿಸ್ಥಿತಿ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ ಜಿಲ್ಲಾಧಿಕಾರಿಗಳು ಈ ಬಗ್ಗೆ ಸರ್ಕಾರಕ್ಕೆ ವರದಿ ನೀಡಿದ್ದಾರೆಯೆ ;ನೀಡಿದ್ದಲ್ಲಿ ಆ ವರದಿಯ ವಿವರಗಳೇನು?

ಇ) ಈ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ರೈತರು ಬೆಳೆಗಳು ಸಂಪೂರ್ಣ ನಾಶವಾಗಿದ್ದು ದೈನಂದಿನ ಜೀವನಕ್ಕಾಗಿ ನೆರೆಯ ಆಂಧ್ರಪ್ರದೇಶಕ್ಕೆ ಹಾಗೂ ಇತರ ಸ್ಥಳಗಳಿಗೆ ವಲಸೆ ಹೋಗುತ್ತಿರುವುದು ನಿಜವಲ್ಲವೇ?

ಈ) ಹಾಗಿದ್ದಲ್ಲಿ ಸರ್ಕಾರ ಈ ಪ್ರದೇಶವನ್ನು ಬರಗಾಲ ಪೀಡಿತ ಪ್ರದೇಶವೆಂದು ಘೋಷಣೆ ಮಾಡಿ ಬರಗಾಲದ ಕಾಮಗಾರಿಗಳನ್ನು ತೆಗೆದುಕೊಳ್ಳುವುದೇ ಹಾಗೂ ಬೆಳೆ ಕಳೆದುಕೊಂಡಿರುವ ರೈತರುಗಳಿಗೆ ಸರ್ಕಾರ ಪರಿಹಾರವನ್ನು ಪ್ರಕಟಿಸುವುದೇ?

ಉ) ಈ ವಿಧಾನಸಭಾ ಕ್ಷೇತ್ರದಲ್ಲಿ ಉಂಟಾಗಿರುವ ಪರಿಸ್ಥಿತಿಯ ಅಧ್ಯಯನಕ್ಕಾಗಿ ಕೇಂದ್ರ ಸರ್ಕಾರದ ತಂಡ ಈ ಭಾಗಕ್ಕೆ ದಿನಾಂಕ: 16.03.2000ರಂದು ಭೇಟಿ ನೀಡಿರುವುದು ನಿಜವೆ ?

ಊ) ಹಾಗಿದ್ದಲ್ಲಿ, ಈ ಪ್ರದೇಶಕ್ಕೆ ರಾಜ್ಯ ಸರ್ಕಾರದ ಉನ್ನತ ಅಧಿಕಾರಿಗಳ ತಂಡ ಭೇಟಿ ನೀಡಿದೆಯೇ; ಇಲ್ಲವಾದಲ್ಲಿ ಈಗಲಾದರೂ ಭೇಟಿ ನೀಡಿ ಪರಿಸ್ಥಿತಿಯನ್ನು ಅಧ್ಯಯನ ನಡೆಸಲಾಗುವುದೇ?

ಋ) ಈ ಭಾಗದಲ್ಲಿ ಉಂಟಾಗಿರುವ ಬರ ಪರಿಸ್ಥಿತಿಯನ್ನು ಪರಿಹರಿಸಲು ಸರ್ಕಾರ ಯಾವ ಕ್ರಮಗಳನ್ನು ರೂಪಿಸುತ್ತದೆ ?

ಶ್ರೀ ಹೆಚ್.ಸಿ ಶ್ರೀ ಕಂಠಯ್ಯ (ಕಂದಾಯ ಸಚಿವರು) :

ಅ) ಹೌದು.

ಆ) ಸರ್ಕಾರದಿಂದ ರೂ.200ಲಕ್ಷಗಳನ್ನು ಉದ್ಯೋಗ ಸೃಜನೆಗಾಗಿ ಈ ಜಿಲ್ಲೆಗೆ ಬಿಡುಗಡೆ ಮಾಡಲಾಗಿದೆ.

ಇ) ಕೆಲ ರೈತರು ತಾತ್ಕಾಲಿಕವಾಗಿ ನೆರೆಯ ಆಂಧ್ರಪ್ರದೇಶಕ್ಕೆ ವಲಸೆ ಹೋಗಿದ್ದಾರೆ. ಆದಾಗ್ಯೂ ಜಿಲ್ಲಾ ಆಡಳಿತವು ಜನರಿಗೆ ಉದ್ಯೋಗ ಒದಗಿಸುವ ಬಗ್ಗೆ ಸೂಕ್ತ ಕ್ರಮವನ್ನು ಕೈಗೊಂಡಿದೆ.

ಈ) ಇಂತಹ ಪ್ರಸ್ತಾವನೆ ಸರ್ಕಾರದ ಮುಂದೆ ಇಲ್ಲ.

ಉ) ಹೌದು

ಊ) ಹೌದು. ದಿನಾಂಕ 9.2-2000ರಂದು ಭೇಟಿ ನೀಡಿತ್ತು.

ಇ)ಈ ಭಾಗದಲ್ಲಿ ಬರ ಪರಿಸ್ಥಿತಿಯನ್ನು ಎದುರಿಸಲು ಸರ್ಕಾರ ಎಲ್ಲಾ ಸಾಧ್ಯವಾದ ಕ್ರಮಗಳನ್ನು ಕೈಗೊಂಡಿದ್ದು ಈಗಾಗಲೇ ಪ್ರಕೃತಿ ವಿಕೋಪ ಪರಿಹಾರ ನಿಧಿಯಿಂದ ರೂ.200 ಲಕ್ಷಗಳನ್ನು ಕೋಲಾರ ಜಿಲ್ಲೆಗೆ ಉದ್ಯೋಗ ಸೃಜನ ಕಾಮಗಾರಿಗಳನ್ನು ಹಮ್ಮಿಕೊಳ್ಳಲು ಬಿಡುಗಡೆ ಮಾಡಲಾಗಿದೆ. ಹಾಗೂ ಕುಡಿಯುವ ನೀರು ಪೂರೈಕೆಗೆ ರೂ.400 ಲಕ್ಷ ಬಿಡುಗಡೆ ಮಾಡಲಾಗಿದೆ.

ತುಮಕೂರು ಜಿಲ್ಲೆಯಲ್ಲಿ ಗೇಣಿಹಕ್ಕಿನ ಅರ್ಜಿ

1206 (1460) ಶ್ರೀ ಶಿವಣ್ಣ ಎಸ್. (ತುಮಕೂರು) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ)ತುಮಕೂರು ಜಿಲ್ಲೆಯಲ್ಲಿ ಗೇಣಿಹಕ್ಕಿನ ಬಗ್ಗೆ ಮೇಲ್ಮನವಿ ಸಲ್ಲಿಸಿಕೊಂಡಿರುವ ಪ್ರಕರಣಗಳಲ್ಲಿ ಉಚ್ಚನ್ಯಾಯಾಲಯದಿಂದ ಭೂ ನ್ಯಾಯ ಮಂಡಳಿಗೆ ರಿಮ್ಯಾಂಡ್ ಆದ ಪ್ರಕರಣಗಳೇಷ್ಟು ?

ಆ) 1998-99ನೇ ಸಾಲಿನಲ್ಲಿ ಭೂ ಸುಧಾರಣೆ ಕಾಯ್ದೆಯಡಿ ಗೇಣಿ ಹಕ್ಕು ಕೋರಿ ಬಂದ ಅರ್ಜಿಗಳೆಷ್ಟು ?

ಶ್ರೀ ಹೆಚ್.ಸಿ ಶ್ರೀ ಕಂಠಯ್ಯ (ಕಂದಾಯ ಸಚಿವರು) :

ಅ)2475

ಆ) ಭೂ ಸುಧಾರಣೆ ಕಾಯ್ದೆಯ ಕಲಂ 77ರಂತೆ 934 ಹೊಸ ಅರ್ಜಿಗಳು ಸ್ವೀಕೃತವಾಗಿದೆ.

ಕೋಲಾರ ಜಿಲ್ಲೆಯನ್ನು ಅಭಾವ ಪೀಡಿತ ಪ್ರದೇಶವೆಂದು ಘೋಷಿಸುವ ಬಗ್ಗೆ

1210 (1439) ಶ್ರೀ ಶ್ರೀನಿವಾಸ ಗೌಡ ಕುದುವನಹಳ್ಳಿ (ಕೋಲಾರ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ ?

ಅ)ಕೋಲಾರ ಜಿಲ್ಲೆಯನ್ನು ಅಭಾವ ಪೀಡಿತ ಜಿಲ್ಲೆಎಂದು ಸರ್ಕಾರವು ಘೋಷಿಸಿರುತ್ತದೆಯೇ?

ಆ)ಅಭಾವ ಪೀಡಿತ ಜಿಲ್ಲೆ ಎಂದು ಘೋಷಿಸಿದ್ದರೆ ಯಾವ ಯಾವ ಪರಿಹಾರ ಕ್ರಮ ಜರುಗಿಸಲಾಗಿದೆ?

ಶ್ರೀ ಹೆಚ್.ಸಿ ಶ್ರೀ ಕಂಠಯ್ಯ (ಕಂದಾಯ ಸಚಿವರು) :

ಅ)ಇಲ್ಲ.

ಆ)ಸರ್ಕಾರವು ಕುಡಿಯುವ ನೀರಿನ ಪೂರೈಕೆಗೆ ರೂ.400ಲಕ್ಷ ಹಾಗೂ ಉದ್ಯೋಗ ಸೃಜನೆ ಕಾಮಗಾರಿಗಾಗಿ ರೂ .200.00 ಲಕ್ಷ ಬಿಡುಗಡೆ ಮಾಡಲಾಗಿದೆ.

ಮೈಸೂರು ಸರ್ವೆಜಿಸ್ಟ್ರಾರ್‌ಕಛೇರಿ ಸ್ಥಳಾಂತರ

1211 (1437) ಶ್ರೀ ಶಂಕರಲಿಂಗೇಗೌಡ ಹೆಚ್.ಎಸ್. (ಚಾಮರಾಜ) : ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?